ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಬುಧವಾರ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರಿಗೆ ನಾಮಪತ್ರ ಸಲ್ಲಿಸಿದರು. ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಗೋವಾ ಮುಖ್ಯಮಂತ್ರಿ ಪ್ರಮೋದ ಸಾವಂತ್, ಶಾಸಕರಾದ ಅಭಯ್ ಪಾಟೀಲ, ಬಾಲಚಂದ್ರ ಜಾರಕಿಹೊಳಿ ಉಪಸ್ಥಿತರಿದ್ದರು.

ಲೋಕಸಭಾ ಚುನಾವಣೆ–2024 ಮತಗಟ್ಟೆಗಳನ್ನು ಪರಿಶೀಲಿಸಿದ ಚುನಾವಣಾಧಿಕಾರಿ ರಾಹುಲ ಶಿಂಧೆ

ಬೆಳಗಾವಿ.ಏ.17 : ಲೋಕಸಭಾ ಸಾರ್ವತ್ರಿಕ ಚುನಾವಣೆಗಳಿಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಪ್ರಾರಂಭಗೊಂಡಿರುತ್ತವೆ. ಮೇ7 ರಂದು ಮತದಾನ ಜರುಗಲಿದ್ದು ಈ ಹಿನ್ನಲೆಯಲ್ಲಿ ಹುಕ್ಕೇರಿ ವಿಧಾನಸಭಾ ಮತಕ್ಷೇತ್ರದ ವ್ಯಾಪ್ತಿಯ ಸೂಕ್ಷ್ಮ, ಅತೀ ಸೂಕ್ಷ್ಮ, ಸಖಿ ಹಾಗೂ ಮಾದರಿ ಮತಗಟ್ಟೆಗಳಿಗೆ ಗುರುವಾರ (ಏ.17) ರಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಗಳು ಹಾಗೂ ಜಿ.ಪಂ. ಸಿ.ಇ.ಓ ರಾಹುಲ ಶಿಂಧೆ ಅವರು ಭೇಟಿ ನೀಡಿ ಪರಿಶೀಲಿಸಿದರು. ಸೂಕ್ಷ್ಮ ಹಾಗೂ ಅತೀ ಸೂಕ್ಷ್ಮ ಮತಗಟ್ಟೆಗಳ ವ್ಯಾಪ್ತಿಯಲ್ಲಿನ ಮತದಾರರಲ್ಲಿ ಆತ್ಮ ವಿಶ್ವಾಸ ಹೆಚ್ಚಿಸಲು ಪೊಲೀಸ್ ಪಥ ಸಂಚಲನ ಹಾಗೂ ಸ್ವೀಪ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಆಯೋಜಿಸುವದರ ಮೂಲಕ ಮತದಾನ ಪ್ರಮಾಣ ಹೆಚ್ಚಿಸಲು ಕ್ರಮಕೈಗೊಳ್ಳುವಂತೆ ಈ ಸಂದರ್ಭದಲ್ಲಿ ಸೂಚಿಸಿದರು.

ಮತದಾನದ ದಿನದಂದು ಮತಗಟ್ಟೆಗೆ ಆಗಮಿಸುವ ಮತದಾರರಿಗೆ ನೆರಳು, ಕುಡಿಯುವ ನೀರು, ಕಾಯುವಿಕೆ ಸ್ಥಳಗಳನ್ನು ಪರಿಶೀಲಿಸಿ, ಮತಗಟ್ಟೆಗಳಿಗೆ ಆಗಮಿಸುವ ವಿಕಲಚೇತನರಿಗೆ ಗಾಲಿ ಕುರ್ಚಿಗಳ ವ್ಯವಸ್ಥೆಗೆ ಕ್ರಮಕೈಗೊಳ್ಳಬೇಕು. ಒಟ್ಟಾರೆಯಾಗಿ ಮತದಾನದ ದಿನದಂದು ಮತಗಟ್ಟೆಗಳಿಗೆ ಆಗಮಿಸುವ ಮತದಾರರಿಗೆ ಯಾವುದೇ ರೀತಿಯ ಅನಾನುಕೂಲತೆಗಳು ಆಗದಂತೆ ನಗಾವಹಿಸಲು ಚಿಕ್ಕೋಡಿ ಲೋಕಸಭಾ ಚುನಾವಣಾಧಿಕಾರಿ ರಾಹುಲ ಶಿಂಧೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಹುಕ್ಕೇರಿ ವಿಧಾನಸಭಾ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳು ಉಪಸ್ಥಿತರಿದ್ದರು.

ನ್ಯಾಷನಲ್ ಟೆಕ್ನೋ ಎಕ್ಸಿಬಿಷನ್‌ನಲ್ಲಿ ಪಾಲಿಟೆಕ್ನಿಕ್ ಕಾಲೇಜ್‌ನ ವಿದ್ಯಾರ್ಥಿಗಳಿಗೆ ತೃತೀಯ ಸ್ಥಾನ

ಬೆಳಗಾವಿ.ಏ.17 ಬೆಂಗಳೂರಿನ ಡಾ. ಬಿ ಆರ್ ಅಂಬೇಡ್ಕರ್ ತಾಂತ್ರಿಕ ಮಹಾವಿದ್ಯಾಲಯದಲ್ಲಿ 2023–24 ನೇ ಸಾಲಿನ ರಾಷ್ಟ್ರ ಮಟ್ಟದ 8 ನೇ ನ್ಯಾಷನಲ್ ಟೆಕ್ನೋ ಎಕ್ಸಿಬಿಷನ್ ಏ.13 ರಂದು ನಡೆಸಲಾಯಿತು.

ಇದರಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜ್‌ನ ವಿದ್ಯಾರ್ಥಿಗಳು ಎಲೆಕ್ಟ್ರಾನಿಕ್ ಆ್ಯಂಡ್ ಕಮ್ಯುನಿಕೇಶ್ ವಿಭಾಗದ ಅಂತಿಮ ವರ್ಷದ ಡಿಪ್ಲೋಮಾ ವಿದ್ಯಾರ್ಥಿಗಳು ಸ್ಮಾರ್ಟ್ ವೇಸ್ಟ್ ವಾಟರ್ ಟ್ರೀಟ್ಮೆಂಟ್ ಪ್ಲಾಂಟ್ ಎಂಬ ಪ್ರೊಜೆಕ್ಟ್‌ಕ್ಕೆ ಮೇಘರಾಣಿ ಮಾಯಾಣಿ ಅವರ ಮಾರ್ಗದರ್ಶನದಲ್ಲಿ ಈರಯ್ಯ ಹಿರೇಮಠ, ಮುಸದ್ದಿಕ್ ಚಕ್ಕುಲಿ, ಅಭಿನವ ಕೋಟಗಿ, ಹರ್ಷ ಚಿತಿಗಿ ವಿದ್ಯಾರ್ಥಿಗಳು ತೃತೀಯಾ ಸ್ಥಾನ ಪಡೆದಿದ್ದಾರೆ. 2023–24 ನೇ ಸಾಲಿನ ರಾಜ್ಯ ಮಟ್ಟದ ಸ್.ಜೆ.ಪಿ.ಎನ್ ಟರ್ಸ್ಟ್ ಹಿರಾ ಸುಗರ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ನೀಡಶೋಷಿಯನ್ನು ಏ.4 ರಂದು ನಡೆಸಲಾಯಿತು.ಇದರಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜ್‌ನ ವಿದ್ಯಾರ್ಥಿಗಳು ಎಲೆಕ್ಟ್ರಾನಿಕ್ ಆ್ಯಂಡ್ ಕಮ್ಯುನಿಕೇಶ್ ವಿಭಾಗದ ಅಂತಿಮ ವರ್ಷದ ಡಿಪ್ಲೋಮಾ ವಿದ್ಯಾರ್ಥಿಗಳು ಸ್ಮಾರ್ಟ್ ಸಿಟಿ ಎಂಬ ಪ್ರೊಜೆಕ್ಟ್‌ನ್ನು ಅಪೂರ್ವಾ, ಸಂಜನಾ, ಶ್ರೇಯಾ, ಸ್ವಾತಿ, ಮೇಘರಾಣಿ ಮಾಯಾಣಿ ಅವರ ಮಾರ್ಗದರ್ಶನದಲ್ಲಿ ಜ್ಞಾನ ಪಡೆದು ಪ್ರಥಮ ಸ್ಥಾನ ಪಡೆದಿದ್ದಾರೆ. ಮಹೇಶ್ ತುಬಾಕಿ ಇವರ ಮಾರ್ಗ ದರ್ಶನದಲ್ಲಿ ಸ್ಮಾರ್ಟ್ ಲೈಬ್ರರಿ ಪ್ರೆಸೆಂಟೆಷನ್‌ಯಲ್ಲಿ ಸೂರ್ಯಕಾಂತ್ ತಿಗಡಿ, ರವಿ ಪಟ್ಟಣಶೆಟ್ಟಿ, ಹಬಿಭ–ಹುಲ್–ರೆಹಮಾನ್, ಅಶ್ವಿನ ಲಮಾನ, ದೀಪಾ ಹಿರೇಮಠ, ಮೊಹಮ್ಮದ್ ಅವೆಜ್ ಚೌಧರಿ ವಿದ್ಯಾ ರ್ಥಿಗಳು ಎರಡನೇ ಸ್ಥಾನ ಪಡೆದಿದ್ದಾರೆ. 2023–24 ನೇ ಸಾಲಿನ ರಿಸೈಕಲ್ ಅರ್ಥ್ ಎಂಬ ವಿಷಯದ ಬಗ್ಗೆ ಬೆಳಗಾವಿಯ ಮರಾಠ ಮಂಡಳ ಪಾಲಿಟೆಕ್ನಿಕ್‌ನಲ್ಲಿ ಏ.6 ರಂದು ನಡೆಸಲಾಯಿತು. ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜ್ ನ ವಿದ್ಯಾರ್ಥಿಗಳು ಎಲೆಕ್ಟ್ರಾನಿಕ್ ಆ್ಯಂಡ್ ಕಮ್ಯುನಿಕೇಶ್ ವಿಭಾಗದ ಎರಡನೇ ವರ್ಷದ ಡಿಪ್ಲೋಮಾ ವಿದ್ಯಾರ್ಥಿಗಳು ಯುಪಿಸೈಕಲಿಂಗ್ ಅಥವಾ ರಿಸೈಕಲಿಂಗ್ ಎಂಬ ಪ್ರೊಜೆಕ್ಟ್‌ನಲ್ಲಿ ಮೇಘರಾಣಿ ಮಾಯಾಣಿ ಅವರ ಮಾರ್ಗದರ್ಶನದಲ್ಲಿ ವಾಣಿಶ್ರೀ, ತೇಜಸ್ವಿನಿ, ಪ್ರತೀಕ್ಷಾ, ಭಾರತೀ ವಿದ್ಯಾರ್ಥಿಗಳಿಗೆ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ.

ರಾಜ್ಯ ಮಟ್ಟದ ತಂತ್ರಜ್ಞಾನ ಮಾದರಿಗಳ ಸ್ಪರ್ಧೆ: ಸರ್ಕಾರಿ ಪಾಲಿಟೆಕ್ನಿಕ್ ವಿದ್ಯಾರ್ಥಿಗಳಿಗೆ ದ್ವಿತೀಯ ಬಹುಮಾನ

ಬೆಳಗಾವಿ.ಏ.17 : ಹಿರಾಶುಗರ ಇನ್‌ಸ್ಟಿಟ್ಯೂಟ ಆಫ್ ಟೆಕ್ನಾಲಾಜಿಯಲ್ಲಿ ಏ.02 ರಂದು ನಡೆದ ಟೆಕ್ನೋವಿಸಿನ್–24 ಎಂಬ ಡಿಪ್ಲೋಮಾ ವಿದ್ಯಾರ್ಥಿಗಳಿಗೆ ರಾಜ್ಯ ಮಟ್ಟದ ತಂತ್ರಜ್ಞಾನ ಮಾದರಿಗಳ ಸ್ಪರ್ಧೆಯನ್ನು ನಡೆಸಲಾಯಿತು.

ಇದರಲ್ಲಿ ಭಾಗವಹಿಸಿದ ಬೆಳಗಾವಿ ನಗರದ ಸರ್ಕಾರಿ ಪಾಲಿಟೆಕ್ನಿಕ್ ಯಾಂತ್ರಿಕ ವಿಭಾಗದ ವಿದ್ಯಾರ್ಥಿಗಳು 4 ಪ್ರಶಸ್ತಿ ಪಡೆದಿರುತ್ತಾರೆ. ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯ ಯಾಂತ್ರಿಕ ವಿಭಾಗದ ಅಂತಿಮ ವರ್ಷದ ಡಿಪ್ಲೋಮಾ ವಿದ್ಯಾರ್ಥಿಗಳಾದ ಅಭಯ ದುಡಮಿ, ನಖಿಲ್ ಉಪಾಧ್ಯೆ, ಪವನ ಅಮಾಸಿ, ಮಂಜುನಾಥ ಲಮಾಣಿ ಇವರು " PLC CONTROLLED VENDING MACHINE WITH UPI INTERFACE " ವಸ್ತು ಪ್ರದರ್ಶನ ಮಾಡಿ ದ್ವಿತೀಯ ಬಹುಮಾನ ಪಡೆದಿರುತ್ತಾರೆ.

ಅದೇ ರೀತಿ ಯಾಂತ್ರಿಕ ವಿಭಾಗದ ಅಂತಿಮ ವರ್ಷದ ಡಿಪ್ಲೋಮಾ ವಿದ್ಯಾರ್ಥಿಗಳಾದ ಪ್ರಸಾದ ಕೆ, ಮಹಮ್ಮದ್ ಸಾಬಿರ್ ಅತ್ತಾರ ಅಹಮ್ಮದ್, ಸಿದ್ಧಾರ್ಥ ಕಾಮ್ಕರ, ರೋಹನ ಗಸ್ತಿ ವಿದ್ಯಾರ್ಥಿಗಳು PLC CONTROLLED BOTTLE FILLING AND CAPPING ಎಂಬ ವಸ್ತು ಪ್ರದರ್ಶನದಲ್ಲಿ ತೃತೀಯ ಬಹುಮಾನವನ್ನು ಪಡೆದುಕೊಂಡರೆ ರೋಹನ ಗಸ್ತಿ, ಕಾರ್ತಿಕ ತಾರಿಹಾಳ ಕಐಅ ವಿಷಯದ ಮೇಲೆ ಪ್ರಬಂಧವನ್ನು (Paper Presentation) ಮಂಡಿಸಿ ತೃತಿಯ ಬಹುಮಾನ ಪಡೆದಿರುತ್ತಾರೆ.

ಪ್ರಥಮ ವರ್ಷದ ವಿದ್ಯಾರ್ಥಿಗಳಾದ ಮಾರುತಿ ಬಂಗಾರೆ, ಆದಿಲ್ ಖಿಲೆದಾರ, ಶಿವಾನಂದ ಗಬ್ಬರ್, ಪ್ರೇಮಸಿಂಗ್ ರಜಪೂತ ಇವರು ಪೋಸ್ಟರ್ ಪ್ರಸೆಂಟೇಶನಲ್ಲಿ ಸಮಾಧಾನಕರ ಬಹುಮಾನ ಪಡೆದಿರುತ್ತಾರೆ. ಎಲ್ಲ ವಿದ್ಯಾರ್ಥಿಗಳನ್ನು ಮತ್ತು ಮಾರ್ಗದರ್ಶಕರಾದ ಲಿಂಗರಾಜ ಶಾಮನೂರ, ಶಿವಲಿಂಗ ಮೂಕನವರ ಇವರನ್ನು ಸಹ ಸಂಸ್ಥೆಯ ಪ್ರಾಚಾರ್ಯರಾದ ವಾಸುದೇವ ಅಪ್ಪಾಜಿಗೋಳ, ಯಾಂತ್ರಿಕ ವಿಭಾಗದ ಮುಖ್ಯಸ್ಥರಾದ ಗಂಗಾಧರ ಹುನಗುಂದ ಅವರು ಅಭಿನಂದಿಸಿದ್ದಾರೆ.

ಏ.18 ಹಾಗೂ 19ರಂದು ಸಾಮಾನ್ಯ ಪ್ರವೇಶ ಪರೀಕ್ಷೆ

ಅಚ್ಚುಕಟ್ಟು–ವ್ಯವಸ್ಥಿತವಾಗಿ ಪರೀಕ್ಷೆ ನಡೆಸುವಂತೆ ಅಪರ ಜಿಲ್ಲಾಧಿಕಾರಿ ಸೂಚನೆ

ವಿಜಯಪುರ ಏ: ವಿವಿಧ ವೃತ್ತಿಪರ ಕೋರ್ಸಗಳ ಪ್ರವೇಶಾತಿಗೆ ಇದೇ ಏಪ್ರಿಲ್ 18 ಹಾಗೂ 19 ರಂದು ಸಾಮಾನ್ಯ ಪ್ರವೇಶ ಪರೀಕ್ಷೆಗಳು (ಸಿಇಟಿ) ವಿವಿಧ 23 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಪರೀಕ್ಷೆಯನ್ನು ಅತ್ಯಂತ ಅಚ್ಚುಕಟ್ಟು ಹಾಗೂ ವ್ಯವಸ್ಥಿತವಾಗಿ ನಡೆಸುವಂತೆ ಪರೀಕ್ಷೆಗೆ ನಿಯೋಜಿತ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಸೂಚನೆ ನೀಡಿದರು.ಮಂಗಳವಾರ ಸಂಜೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪರೀಕ್ಷಾ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ವಿಜಯಪುರ ನಗರದ 21 ಹಾಗೂ ಬಬಲೇಶ್ವರ ಮತ್ತು ತಿಕೋಟಾದಲ್ಲಿ ತಲಾ ಒಂದು ಪರೀಕ್ಷಾ ಕೇಂದ್ರಗಳು ಸೇರಿದಂತೆ ಒಟ್ಟು 23 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಜರುಗಲಿವೆ ಎಂದು ಹೇಳಿದರು.ಸಾಮಾನ್ಯ ಪ್ರವೇಶ ಪರೀಕ್ಷೆಗೆ ಒಟ್ಟು 11966 ವಿದ್ಯಾರ್ಥಿಗಳು ನೊಂದಾಯಿಸಿಕೊಂಡಿದ್ದು, ಏ.18 ರಂದು ಬೆಳಗ್ಗೆ 10–30ರಿಂದ 11–50ರವರೆಗೆ ಜೀವಶಾಸ್ತ್ರ, ಹಾಗೂ ಮಧ್ಯಾಹ್ನ 2–30ರಿಂದ 3–50ರವರೆಗೆ ಗಣಿತ ಪರೀಕ್ಷೆಗಳು ಜರುಗಲಿವೆ. ಅದರಂತೆ ಏ.19ರಂದು ಬೆಳಗ್ಗೆ 10–30ರಿಂದ 11–50ರವರೆಗೆ ಭೌತಶಾಸ್ತ್ರ ಹಾಗೂ ಮಧ್ಯಾಹ್ನ 2–30ರಿಂದ3–50ರವರೆಗೆ ರಸಾಯನಶಾಸ್ತ್ರ ಪರೀಕ್ಷೆಗಳು ಜರುಗಲಿದ್ದು, ಪ್ರತಿ 24 ವಿದ್ಯಾರ್ಥಿಗಳಿಗೆ ಓರ್ವ ಕೊಠಡಿ ಮೇಲ್ವಿಚಾರಕರನ್ನು ನೇಮಿಸುವಂತೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಪರೀಕ್ಷೆಗೆ ನಿಯೋಜಿತ ಸಂಬಂಧಿಸಿದ ಅಧಿಕಾರಿಗಳು ಪರೀಕ್ಷಾ ಕೇಂದ್ರಗಳಲ್ಲಿ ನಗದಿತ ವಿದ್ಯಾರ್ಥಿಗಳಿಗನುಗುಣವಾಗಿ ಸೂಕ್ತ ಆಸನ ವ್ಯವಸ್ಥೆ, ಪರೀಕ್ಷಾ ಕೊಠಡಿಯಲ್ಲಿ ಸರಿಯಾದ ಗಾಳಿ–ಬೆಳಕಿನ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ ಸೇರಿದಂತೆ ಎಲ್ಲ ಅಗತ್ಯ ಸಿದ್ಧತೆಗಳು ಇರುವಂತೆ ನೋಡಿಕೊಳ್ಳಬೇಕು. ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳು ತಮಗೆ ನಗದಿತ ಆಸನಗಳಲ್ಲಿಯ ಕುಳಿತುಕೊಳ್ಳುವಂತೆ ನೋಡಿಕೊಳ್ಳಬೇಕು. ಕಡ್ಡಾಯವಾಗಿ ಪ್ರವೇಶ ಪತ್ರವನ್ನು ಪರಿಶೀಲನೆ ನಡೆಸಿ ಪ್ರವೇಶಾವಕಾಶ ಒದಗಿಸಬೇಕು ಪರೀಕ್ಷೆ ಅವಧಿಯಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಪರೀಕ್ಷಾ ಕೇಂದ್ರಗಳ ಸುತ್ತಲೂ ನಷೇಧಾಜ್ಞೆ ಜಾರಿಗೊಳಿಸಲಾಗುವುದು ಎಂದು ಅವರು ಹೇಳಿದರು. ಪ್ರತಿ ಪರೀಕ್ಷಾ ಕೇಂದ್ರಕ್ಕೆ ಓರ್ವ ವೀಕ್ಷಕರಂತೆ ಒಟ್ಟು 23 ವೀಕ್ಷಕರನ್ನು ನೇಮಕ ಮಾಡಿ ಆದೇಶಿಸಲಾಗಿದೆ. ಪ್ರತಿ ಪರೀಕ್ಷಾ ಕೇಂದ್ರಕ್ಕೆ ಓರ್ವ ಉಪ ಮುಖ್ಯ ಅಧೀಕ್ಷಕರು, ಓರ್ವ ಪ್ರಶ್ನೆ ಪತ್ರಿಕೆ ಪಾಲಕರು ಮತ್ತು ಓರ್ವ ವಿಶೇಷ ಸ್ಥಾನಕ ಜಾಗೃತ ದಳ ಸದಸ್ಯರನ್ನು ನೇಮಕ ಮಾಡಲಾಗಿದೆ. ವೀಕ್ಷಕರು ತಮಗೆ ನಿಯೋಜಿಸಿದ ಪರೀಕ್ಷಾ ಕೇಂದ್ರಗಳಿಗೆ ಒಂದು ಗಂಟೆ ಮುಂಚಿತವಾಗಿ ಹಾಜರಾಗಿ, ಕೊಠಡಿ ಮೇಲ್ವಿಚಾರಕರನ್ನು ನಿಯೋಜಿಸಬೇಕು. ಪರೀಕ್ಷೆಗೆ ನಿಯೋಜಿತ ಎಲ್ಲ ವೀಕ್ಷಕರು, ಮೇಲ್ವಿಚಾರಕರು, ಉಪ ಮುಖ್ಯ ಅಧೀಕ್ಷಕರುಗಳು ವೀಕ್ಷಣಾಧಿಕಾರಿಗಳು, ಜಾಗೃತದಳದ ಅಧಿಕಾರಿಗಳು, ಪ್ರಶ್ನೆ ಪತ್ರಿಕೆ ಮಾರ್ಗಾಧಿಕಾರಿಗಳು, ಸಹ ಮುಖ್ಯ ಅಧಿಕ್ಷಕರು ಸೇರಿದಂತೆ ಪರೀಕ್ಷೆಗೆ ನಿಯೋಜಿತ ಎಲ್ಲ ಅಧಿಕಾರಿಗಳು ಯಾವುದೇ ಲೋಪಗಳಿಗೆ ಅವಕಾಶ ನೀಡದೇ ನಿಯಮಾನುಸಾರ ಜವಾಬ್ದಾರಿಯಿಂದ ವ್ಯವಸ್ಥಿತವಾಗಿ ಕಾರ್ಯನಿರ್ವಹಿಸುವಂತೆ ಅವರು ಸೂಚನೆ ನೀಡಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾರ ಅವರು ಮಾತನಾಡಿ, ಜಿಲ್ಲೆಯ ಎಲ್ಲ 23 ಪರೀಕ್ಷಾ ಕೇಂದ್ರಗಳಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ ವ್ಯವಸ್ಥೆ ಮಾಡಲಾಗಿದ್ದು, ಯಾವುದೇ ಲೋಪಗಳಿಗೆ ಅವಕಾಶ ನೀಡದೇ ಪೊಲೀಸ್ ಸಿಬ್ಬಂದಿಗಳ ಸಹಕಾರ ಪಡೆದು ಕಟ್ಟುನಿಟ್ಟಿನ ಕ್ರಮ ವಹಿಸಿ ಯಶಸ್ವಿಯಾಗಿ ಪರೀಕ್ಷೆ ನಡೆಸುವಂತೆ ಅವರು ಸೂಚನೆ ನೀಡಿದರು.ಸಭೆಯಲ್ಲಿ ಪದವಿಪೂರ್ವ ಶಿಕ್ಷಣ ಇಲಾಖೆ ಪ್ರಭಾರ ಉಪ ನಿರ್ದೇಶಕ ಎಲ್.ಆರ್. ಹಳ್ಳದಮನಿ, ಖಜಾನೆ ಇಲಾಖೆ ಉಪನಿರ್ದೇಶಕರು ಸೇರಿದಂತೆ ಪರೀಕ್ಷೆಗೆ ನಿಯೋಜಿತ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

ಮತದಾನ ಮಾಡಲು ನಿಷ್ಕಾಳಜಿ ತೋರದಿರಿ : ನಲಿನ್ ಅತುಲ್

ಗಮನ ಸೆಳೆದ ಕ್ಯಾಂಡಲ್ ಲೈಟ್ ಮೆರವಣಿಗೆ:(1 ನೇ ಪುಟದಿಂದ) ಕೊಪ್ಪಳ ನಗರದ ಗಂಜ್ ವೃತ್ತದಿಂದ ಅಶೋಕ ವೃತ್ತದವರೆಗೆ ಹಾಗೂ ಗಡಿಯಾರ ಕಂಬ ವೃತ್ತದಿಂದ ಅಶೋಕ ವೃತ್ತದವರೆಗೆ ಸೇರಿ ಎರಡು ತಂಡಗಳಿಂದ ಹಮ್ಮಿಕೊಳ್ಳಲಾಗಿದ್ದ ಕ್ಯಾಂಡಲ್ ಲೈಟ್ ಮೆರವಣಿಗೆಯು ಸಾರ್ವಜನಕರ ಗಮನ ಸೆಳೆಯಿತು. ಈ ಜಾಥಾದಲ್ಲಿ ಅಧಿಕಾರಿಗಳು, ಸಿಬ್ಬಂದಿ, ಕಾಲೇಜು ವಿದ್ಯಾರ್ಥಿಗಳು ಪಾಲ್ಗೊಂಡು ಮತದಾನ ಜಾಗೃತಿಗೆ ಕೈಜೋಡಿಸಿದರು.ಮತದಾನ ಜಾಗೃತಿಗೆ ಜಿಲ್ಲಾ ಸ್ವೀಪ್ ಸಮಿತಿಯ ಈ ವಿಶೇಳ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಸಾವಿತ್ರಿ ಬಿ ಕಡಿ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿಗಳಾದ ಮಲ್ಲಪ್ಪ ತೊದಲಬಾಗಿ, ಜಂಟಿ ಕೃಷಿ ನರ್ದೇಶಕರಾದ ರುದ್ರೇಶಪ್ಪ ಟಿ.ಎಸ್., ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನರ್ದೇಶಕರಾದ ರೇಳ್ಮಾ ಹಾನಗಲ್, ಕೊಪ್ಪಳ ತಹಶೀಲ್ದಾರ್ ವಿಠ್ಠಲ ಚೌಗಲಾ, ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ಜಿಲ್ಲಾ ಸ್ವೀಪ್ ಐಕಾನ್ಸ್ ಡಾ.ಶಿವಕುಮಾರ್ ಮಾಲಿಪಾಟೀಲ್, ಪೂರ್ಣಿಮಾ, ರಮ್ಯಾ ಹಾಗೂ ಮಹೆಬೂಬ್ ಕಿಲ್ಲೆದಾರ್ ಸೇರಿದಂತೆ ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಸೇರಿದಂತೆ ಶಿಕ್ಷಕರರು, ಉಪನ್ಯಾಸಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ದ್ವಿತೀಯ ಪಿಯುಸಿ ಪರೀಕ್ಷೆ–2; ಅಗತ್ಯ ಸಿದ್ಧತೆಗೆ ಜಿಲ್ಲಾಧಿಕಾರಿ ಸೂಚನೆ

(1 ನೇ ಪುಟದಿಂದ)

ಹೆಚ್ಚುವರಿ ಜಿಲ್ಲಾಧಿಕಾರಿ ಸುರೇಖಾ ಅವರು ಮಾತನಾಡಿ ದ್ವಿತೀಯ ಪಿಯುಸಿ ಪರೀಕ್ಷೆಯನ್ನು ಸುಗಮವಾಗಿ ಹಾಗೂ ಸುಸೂತ್ರವಾಗಿ ನಡೆಸಲು ಎಲ್ಲ ರೀತಿಯ ಕ್ರಮ ಕೈಗೊಳ್ಳಬೇಕು. ವಿದ್ಯಾರ್ಥಿಗಳಿಗೆ ಯಾವುದೇ ರೀತಿ ತೊಂದರೆಯಾಗದಂತೆ ಗಮನ ಹರಿಸಬೇಕು ಎಂದು ತಿಳಿಸಿದರು.

ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನರ್ದೇಶಕರಾದ ಜಿ.ಎನ್.ಕುರ್ತಕೋಟಿ ಅವರು ಮಾತನಾಡಿ ಜಿಲ್ಲೆಯ ರೋಣ ಪಟ್ಟಣದ ವೀರರಾಣಿ ಚೆನ್ನಮ್ಮ ಪದವಿ ಪೂರ್ವ ಕಾಲೇಜು, ನರಗುಂದ ಪಟ್ಟಣದ ಸರಕಾರಿ ಪದವಿ ಪೂರ್ವ ಕಾಲೇಜು, ಲಕ್ಷ್ಮೇಶ್ವರ ಪಟ್ಟಣದ ಸರಕಾರಿ ಪದವಿ ಪೂರ್ವ ಕಾಲೇಜು, ಶಿರಹಟ್ಟಿ ಪಟ್ಟಣದ ಸರಕಾರಿ ಪದವಿ ಪೂರ್ವ ಕಾಲೇಜು, ಮುಂಡರಗಿಯ ಅನ್ನದಾನೇಶ್ವರ ಕಾಲೇಜು, ಗಜೇಂದ್ರಗಡ ಪಟ್ಟಣದ ಸರಕಾರಿ ಪದವಿ ಪೂರ್ವ ಕಾಲೇಜು ಗದಗ ನಗರದ ಎಚ್.ಸಿ.ಇ.ಎಸ್. ಪದವಿ ಪೂರ್ವ ಕಾಲೇಜು ಮತ್ತು ಜೆ.ಟಿ. ಪದವಿ ಪೂರ್ವ ಕಾಲೇಜು ಈ 8 ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ ಎಂದು ಮಾಹಿತಿ ನೀಡಿದರು. ಶಾಲಾ ಶಿಕ್ಷಣ ಇಲಾಖೆಯ ಉಪ ನರ್ದೇಶಕರಾದ ಎಂ.ಎ.ರಡ್ಡೇರ, ವಿವಿಧ ಕಾಲೇಜುಗಳ ಪ್ರಾಂಶುಪಾಲರು ಇದ್ದರು.

6ನೇ ತರಗತಿ ಮೌಲಾನಾ ಆಜಾದ್ ಮಾದರಿ ಶಾಲೆಗಳಿಗೆ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ.ಏ.17 : 2024–25 ನೇ ಸಾಲಿಗೆ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಳಗಾವಿ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಆಜಾದ್ ಮಾದರಿ ಶಾಲೆಗಳ 6ನೇ ತರಗತಿಗಳಿಗೆ ಪ್ರವೇಶ ಪಡೆಯಲು ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಅರ್ಹ ವಿದ್ಯಾರ್ಥಿಗಳಿಂದ ಅರ